# All India Radio: Bangalore
# Regional Bulletin In Kannada
# 06.09.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 06.09.2025 / 6.40 p.m.

**<><><><>**

ಮುಖ್ಯಾಂಶಗಳು

- ಕೃಷ್ಣಾ ಮೇಲ್ದಂಡೆ ಯೋಜನೆ ಮೂರನೇ ಹಂತ - ಒಂದು ವಾರದೊಳಗೆ ಭೂಪರಿಹಾರಕ್ಕೆ ದರ ನಿಗದಿ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಪ್ರಧಾನಮಂತ್ರಿ ಆವಾಸ್ ಯೋಜನೆಯಲ್ಲಿ ಅವ್ಯವಹಾರ- ಲೋಪವೆಸಗಿರುವ ಅಧಿಕಾರಿಗಳ ವಿರುದ್ಧ ಸಚಿವ ಕೃಷ್ಣ ಭೈರೇಗೌಡ ಕಠಿಣ ಕ್ರಮದ ಎಚ್ಚರಿಕೆ
- ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳ ಶೀಘ್ರ ಭರ್ತಿಗೆ ಸರ್ಕಾರ ಚಿಂತನೆ
- ಒಳಮೀಸಲಾತಿಯಿಂದ ೫೯ ಜಾತಿಗಳಿಗೆ ಅನ್ಯಾಯ; ಗೊಂದಲ ಸರಿಪಡಿಸುವಂತೆ ಬಿಜೆಪಿ ಆಗ್ರಹ
- ಭಾರತದಲ್ಲಿ ನಾಳೆ ಗೋಚರಿಸಲಿರುವ ಖಗ್ರಾಸ ಚಂದ್ರಗ್ರಹಣ; ನಭೋಮಂಡಲದ ಕೌತುಕಕ್ಕೆ ವಿಜ್ಞಾನಿಗಳಿಗೆ ಕಾತುರ

<><><><>

ಕೃಷ್ಣಾ ಮೇಲ್ದಂಡೆ ಯೋಜನೆ ಮೂರನೇ ಹಂತಕ್ಕೆ ಸಂಬಂಧಿಸಿದಂತೆ ಮುಂದಿನ ವಾರದೊಳಗೆ ಸಭೆ ಕರೆದು ಭೂ ಪರಿಹಾರಕ್ಕೆ ದರ ನಿಗದಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಆಲಮಟ್ಟಿಯಲ್ಲಿರುವ ಲಾಲ್ ಬಹುದ್ದೂರ್ ಶಾಸ್ತ್ರೀ ಸಾಗರದ ಕೃಷ್ಣೆಯ ಜಲಧಿಗೆ ಗಂಗೆಪೂಜೆ ಹಾಗೂ ಬಾಗಿನ ಅರ್ಪಿಸಿ ಮಾತನಾಡಿದ ಅವರು, ಗೆಜೆಟ್ ಅಧಿಸೂಚನೆಯಾದರೆ ಅಣೆಕಟ್ಟು ಎತ್ತರಿಸಲು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ. ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆ ಸ್ಥಾಪಿಸುವ ಗುರಿ ಹೊಂದಲಾಗಿದ್ದು, ಹಂತಹಂತವಾಗಿ ಈ ಗುರಿ ಸಾಧಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ನಾಡಹಬ್ಬ ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮುಷ್ತಾಕ್ ಆಯ್ಕೆಯನ್ನು ವಿರೋಧಿಸಿ, ಮಾಜಿ ಸಂಸದ ಪ್ರತಾಪ್ ಸಿಂಹ ಹೈಕೋರ್ಟ್ ಮೆಟ್ಟಿಲೇರಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ವಿಷಯವನ್ನು ಕೋರ್ಟ್ ತೀರ್ಮಾನಿಸಲಿ ಎಂದು ಹೇಳಿದ್ದಾರೆ.

**ಬೈಟ್:- ಸಿದ್ದರಾಮಯ್ಯ ಸಿಎಂ**

ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒಂದು ವಾರದೊಳಗೆ ಭೂಸ್ವಾಧೀನಕ್ಕೆ ನಿಗಧಿ ಮಾಡಿರುವ ಪರಿಹಾರ ಮೊತ್ತ ಘೋಷಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಮಂಜೂರಾಗಿರುವ ಮನೆಗಳಲ್ಲಿ ಭಾರಿ ಅವ್ಯವಹಾರ ನಡೆದಿದ್ದು ಈ ಕುರಿತು ಈಗಾಗಲೇ ತನಿಖೆಗೆ ಆದೇಶಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಹಾಸನದಲ್ಲಿ ಮಾತನಾಡಿದ ಅವರು, ಲೋಪ ಎಸಗಿರುವ ಅಧಿಕಾರಿಗಳು ಯಾರೇ ಆಗಿದ್ದರೂ ಅಂತವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಹಾಸನ ಜಿಲ್ಲೆಯ ಅರಸೀಕೆರೆ ಹಾಗೂ ಸಕಲೇಶಪುರ ಭಾಗದಲ್ಲಿ ಮನೆ ಮಂಜೂರು ಪ್ರಕ್ರಿಯೆಯಲ್ಲಿ ಪಿಡಿಒ, ಇಒ, ಪಿಡಿ ಮತ್ತು ಮುಖ್ಯ ಲೆಕ್ಕಾಧಿಕಾರಿಗಳು ಶಾಮೀಲಾಗಿ ಅರ್ಹ ಫಲಾನುಭವಿಗಳಿಗೆ ನೀಡಬೇಕಾದ ಮನೆಗಳನ್ನು ಇತರರ ದಾಖಲಾತಿ ಬಳಸಿ ಲಕ್ಷಾಂತರ ರೂಪಾಯಿ ವಂಚನೆ ಮಾಡಲಾಗಿದೆ. ಈ ಪ್ರಕರಣದ ಸಂಬಂಧ ಈಗಾಗಲೇ ಓರ್ವ ಪಿಡಿಒ ಅಮಾನತು ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಅಧಿಕಾರಿಗಳು ಲೋಪ ಎಸಗಿರುವುದು ಕಂಡು ಬಂದರೆ ಸಹಿಸುವುದಿಲ್ಲ. ಇದು ಎಲ್ಲಾ ಇಲಾಖೆಯ ಅಧಿಕಾರಿಗಳಿಗೂ ಅನ್ವಯಿಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಲಿದೆ ಎಂದು ರಾಜ್ಯದ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಆಳಂದ ಪಟ್ಟಣದಲ್ಲಿ ೫ ಕೋಟಿ ರೂಪಾಯಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗುತ್ತಿರುವ ಬಸ್ ನಿಲ್ದಾಣದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಪ್ರಸ್ತುತ ೨ ಸಾವಿರದ ೭೩೬ ಅಧಿಕಾರಿ-ನೌಕರರ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲು ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ. ಕಳೆದ ಎರಡು ವರ್ಷದ ಅವಧಿಯಲ್ಲಿ ಈ ಸಂಸ್ಥೆಗೆ ೧ ಸಾವಿರದ ೩೧ ಬಸ್ ಒದಗಿಸಲಾಗಿದ್ದು, ಕೆ.ಎಸ್.ಆರ್.ಟಿ.ಸಿ ೯೦೦, ವಾಯುವ್ಯ ಸಾರಿಗೆಗೆ ೭೦೦, ಕಲ್ಯಾಣ ಕರ್ನಾಟಕ ಸಾರಿಗೆಗೆ ೪೦೦ ಬಸ್ ನೀಡಲಾಗಿದೆ. ಹೆಚ್ಚಿನ ಬಸ್ ಖರೀದಿಸಲು ಕೆ.ಕೆ.ಆರ್.ಡಿ.ಬಿ. ಮಂಡಳಿಗೆ ಅರ್ಥಿಕ ನೆರವು ಕೋರಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

<><><>

ರಾಜ್ಯ ಸರ್ಕಾರ ಜನಸಂಖ್ಯೆ ಆಧಾರದಲ್ಲಿ ಮೀಸಲಾತಿ ವರ್ಗೀಕರಣ ಮಾಡಲಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಸಂಸದ ಬಸವರಾಜ್ ಬೊಮ್ಮಾಯಿ ಆರೋಪಿಸಿದ್ದಾರೆ. ರಾಜ್ಯ ಸರ್ಕಾರದ ಒಳಮೀಸಲಾತಿಯಿಂದ ಯಾರು ಸಂತುಷ್ಟರಾಗಿಲ್ಲ. ಲಂಬಾಣಿ, ಭೋವಿ ಜೊತೆಗೆ ೫೯ ಜಾತಿಗಳನ್ನು ಸೇರಿಸಲಾಗಿದೆ ಎಂದು ದೂರಿದ್ದಾರೆ. ಇದೇ ವೇಳೆ ಬ್ಯಾಲೆಟ್ ಪೇಪರ್ ಚುನಾವಣೆ ಕುರಿತಂತೆ ಪ್ರತಿಕ್ರಿಯಿಸಿ, ಬ್ಯಾಲೆಟ್ ಪೇಪರ್ ಇದ್ದಾಗ ಸಾಕಷ್ಟು ಅಕ್ರಮಗಳಾಗಿವೆ. ಸಿದ್ದರಾಮಯ್ಯ ಅವರು ಇವಿಯಂ ಮೂಲಕ ಆಯ್ಕೆಯಾಗಿ ಎರಡು ಬಾರಿ ಮುಖ್ಯಮಂತ್ರಿ ಆಗಿದ್ದಾರೆ. ಬ್ಯಾಲೆಟ್ ಪೇಪರ್ ಅವರ ನಾಯಕರನ್ನು ಮೆಚ್ಚಿಸಲು ಮಾಡಿರುವ ತೀರ್ಮಾನ ಎಂದು ತಿಳಿಸಿದ್ದಾರೆ.

<><><><>

ನಾಳೆ ಸಂಪೂರ್ಣ ಚಂದ್ರಗ್ರಹಣ ಗೋಚರಿಸಲಿದೆ. ಬೆಂಗಳೂರಿನ ಜವಾಹರಲಾಲ್ ನೆಹರೂ ತಾರಾಲಯ ಸೇರಿ ವಿವಿದೆಡೆ ಗ್ರಹಣ ವೀಕ್ಷಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜವಾಹರ್‌ಲಾಲ್ ನೆಹರೂ ತಾರಾಲಯದ ನಿರ್ದೇಶಕ ಬಿ.ಆರ್.ಗುರುಪ್ರಸಾದ್ ತಿಳಿಸಿದ್ದಾರೆ. ಅಪರೂಪದ ಈ ಘಟನೆಯನ್ನು ಬರಿಗಣ್ಣಿನಿಂದ ಸುಲಭವಾಗಿ ವೀಕ್ಷಿಸಬಹುದು. ಚಂದ್ರ ಮತ್ತು ಸೂರ್ಯನ ನಡುವೆ ಭೂಮಿ ಬಂದಾಗ ನಡೆಯುವ ಈ ನೆರಳಿನ ಆಟವನ್ನು ಎಲ್ಲರೂ ಕಣ್ತುಂಬಿಕೊಳ್ಳಬಹುದೆಂದು ಅವರು ತಿಳಿಸಿದ್ದಾರೆ. ನಾಳೆ ರಾತ್ರಿ ೯.೫೭ರಿಂದ ಗ್ರಹಣ ಪ್ರಕ್ರಿಯೆ ಆರಂಭವಾಗಲಿದೆ. ೧೧ ಗಂಟೆ ೧ ನಿಮಿಷದಿಂದ ೧೨.೨೨ರ ಅವಧಿಯಲ್ಲಿ ಸಂಪೂರ್ಣ ಚಂದ್ರಗ್ರಹಣ ಸಂಭವಿಸಲಿದೆ. ಸೋಮವಾರ ಮುಂಜಾನೆ ೨.೨೫ಕ್ಕೆ ಗ್ರಹಣ ಅಂತ್ಯಗೊಳ್ಳಲಿದೆ.

<><><><>

ಮೈಸೂರು ದಸರಾ ವಿವಾದದ ಜೊತೆಗೆ, ಬೂಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ಐತಿಹಾಸಿಕ ಉತ್ಸವವನ್ನು ಉದ್ಘಾಟಿಸುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ತಡೆ ನೀಡುವಂತೆ ಕೋರಿ ಬಿಜೆಪಿಯ ಮಾಜಿ ಸಂಸದ ಪ್ರತಾಪ್ ಸಿಂಹ ಹೈಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಹಿಂದೂ ಮತ್ತು ಕನ್ನಡ ವಿರೋಧಿ ಭಾವನೆ ಹೊಂದಿರುವ ಬಾನು ಮುಷ್ತಾಕ್ ಅವರಿಂದ ದಸರಾ ಉದ್ಘಾಟಿಸಿದರೆ ಶತಮಾನಗಳಿಂದ ಆಚರಿಸಿ ಬಂದಿರುವ ಸಂಪ್ರದಾಯಕ್ಕೆ ಧಕ್ಕೆ ಬರಲಿದೆ ಎಂದು ಅರ್ಜಿಯಲ್ಲಿ ಉಲ್ಲೇಖ ಮಾಡಿದ್ದಾರೆ.

<><><><>

ಮಕ್ಕಳ ಕಲಿಕೆಯಲ್ಲಿ ನಿರಂತರವಾಗಿ ತೊಡಗುವ ಶಿಕ್ಷಕ ಸಮೂಹದ ಶ್ರಮ ಶ್ಲಾಘನೀಯವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ. ಶಿಕ್ಷಕರ ದಿನಾಚರಣೆ ಅಂಗವಾಗಿ ಇಂದು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ

ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಭಾಗದಲ್ಲಿ ಶಿಕ್ಷಕರ ನೇಮಕಾತಿ, ಮುಂಬಡ್ತಿ, ವೇತನ ಸೇರಿದಂತೆ ಶಿಕ್ಷಕರ ಮತ್ತು ಸಾರ್ವಜನಿಕರ ಬೇಡಿಕೆಗಳಿಗೆ ರಾಜ್ಯ ಸರ್ಕಾರವು ಹಂತ-ಹಂತವಾಗಿ ಸ್ಪಂದಿಸುತ್ತಿದೆ ಎಂದು ಹೇಳಿದ್ದಾರೆ.

<><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಜಿಎಸ್‌ಟಿ ಇಳಿಕೆ ಮಾಡಿರುವುದು ಸ್ವಾಗತಾರ್ಹ. ಆದರೆ ಎಂ.ಎಸ್.ಎಂ.ಇ. ತೆರಿಗೆಯಲ್ಲಿ ಕಡಿಮೆ ಮಾಡದಿರುವುದು ಬೇಸರ ತಂದಿದೆ ಎಂದು ಬೆಂಗಳೂರಿನ ಪೀಣ್ಯ ಕೈಗಾರಿಕಾ ಪ್ರದೇಶದ ಅಧ್ಯಕ್ಷರಾದ ದಾನಪ್ಪ ಡಿ.ಪಿ.ಆಕಾಶವಾಣಿಗೆ ತಿಳಿಸಿದ್ದಾರೆ.

**ಧ್ವನಿ : ದಾನಪ್ಪ ಡಿ.ಪಿ.**

ವಿಮೆಗಳನ್ನು ಜಿಎಸ್ ಟಿ ಯಿಂದ ಹೊರಗಿಟ್ಟಿರುವುದು ಸ್ವಾಗತಾರ್ಹ ಎಂದು ಎಲ್‌ಐಸಿ ಜೀವ ವಿಮಾ ನಿಗಮದ ಹಿರಿಯ ಸಲಹೆಗಾರ ಕೆ. ಚಂದ್ರಶೇಖರ್ ಆಕಾಶವಾಣಿಗೆ ಪ್ರತಿಕ್ರಿಯೆ ನೀಡಿದ್ದಾರೆ.

**ಧ್ವನಿ : ಕೆ. ಚಂದ್ರಶೇಖರ್**

<><><>

ಮಾಹಿತಿ ಹಕ್ಕು ಆಯೋಗದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ೭೦೭ ಮೇಲ್ಮನವಿ ಅರ್ಜಿಗಳು ವಿಲೇವಾರಿಗೆ ಬಾಕಿ ಉಳಿದಿವೆ ಎಂದು ಮಾಹಿತಿ ಆಯೋಗದ ಆಯುಕ್ತರಾದ ಬದ್ರುದ್ದೀನ್ ತಿಳಿಸಿದ್ದಾರೆ. ಜಿಲ್ಲೆಯ ವಿವಿಧ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳೊಂದಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಜಾಗೃತಿ ಕಾರ್ಯಗಾರ ಹಾಗೂ ಅಧಿಕಾರಿಗಳೊಂದಿಗಿನ ಸಂವಾದದಲ್ಲಿ ಅವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>